ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ

ದಿನಾಂಕ : DATE : 16/04/2019

# ಕೇಂದ್ರೀಯ ವಿವಿಗಳಲ್ಲಿ ಮೀಸಲಾತಿಗೆ ಅಸ್ತು

ಉ-ವಾ 16/4/19

**ನವದೆಹಲಿ:** ನರೇಂದ್ರ ಮೋದಿ ನೇತೃತ್ವದ ಸರ್ಕಾರ ಘೋಷಿಸಿದಂತೆ ಆರ್ಥಿಕವಾಗಿ ಹಿಂದುಳಿದ ಮೇಲ್ವರ್ಗದವರಿಗೂ ಶೇ. 10 ಮೀಸಲಾತಿ ನೀಡುವ ನಿರ್ಧಾರವನ್ನು ಕೇಂದ್ರೀಯ ಶೈಕ್ಷಣಿಕ ಸಂಸ್ಥೆಗಳಿಗೂ ವಿಸ್ತರಿಸಲು ಸಚಿವ ಸಂಪುಟ ನಿರ್ಧರಿಸಿದೆ. ಇದಕ್ಕಾಗಿ 158 ಕೇಂದ್ರೀಯ ಶೈಕ್ಷಣಿಕ ಸಂಸ್ಥೆಗಳಲ್ಲಿ 2 ಲಕ್ಷಕ್ಕೂ ಹೆಚ್ಚು ಹೆಚ್ಚುವರಿ ಸೀಟುಗಳನ್ನು ಸೃಷ್ಟಿಸಲಾಗುತ್ತದೆ. ಮೂಲಗಳ ಪ್ರಕಾರ ಈ ನಿರ್ಧಾರಕ್ಕೂ ಮುನ್ನ ಚುನಾವಣಾ ಆಯೋಗದ ಅನುಮತಿಯನ್ನು ಕೇಂದ್ರ ಸರ್ಕಾರ ಕೇಳಿತ್ತು ಎನ್ನಲಾಗಿದೆ.

2019-20 ರ ಶೈಕ್ಷಣಿಕ ವರ್ಷದಲ್ಲಿ 1.19 ಲಕ್ಷ ಹಾಗೂ 2020-21 ರ ವರ್ಷದಲ್ಲಿ 95 ಸಾವಿರ ಸೀಟ್‌ಗಳನ್ನು ಸೃಷ್ಟಿಸಲಾಗುತ್ತದೆ. ಇದಕ್ಕಾಗಿ 4315 ಕೋಟಿ ರೂ. ಮೀಸಲಿಡಲಾಗಿದೆ. ಜನವರಿ 9 ರಂದು ರಾಜ್ಯಸಭೆಯಲ್ಲಿ ಈ ಮಸೂದೆಗೆ ಸಮ್ಮತಿ ಲಭ್ಯವಾಗಿತ್ತು. ಈಗಾಗಲೇ ಇರುವ ಶೇ. 50 ಒಟ್ಟು ಮೀಸಲಾತಿಯ ಹೊರತಾಗಿ ಶೇ. 10ರ ಮೀಸಲಾತಿ ಆರ್ಥಿಕವಾಗಿ ಹಿಂದುಳಿದ ಮೇಲ್ವರ್ಗದವರಿಗೆ ಲಭ್ಯವಾಗಲಿದೆ.